# ಕರ್ನಾಟಕ ವಿಧಾನ ಪರಿಷತ್

| | | |
|---|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 885(868) |
| ಸದಸ್ಯರ ಹೆಸರು | : | ಶ್ರೀ ಯು.ಬಿ.ವೆಂಕಟೇಶ್ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸುವ ದಿನಾಂಕ | : | 28.09.2020 |
| ಉತ್ತರಿಸುವ ಸಚಿವರು | : | ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕರೋನಾ ವೈರಸ್ ಸಂದರ್ಭದಲ್ಲಿ ಸಾರ್ವಜನಿಕರಿಗೆ ಅವಶ್ಯವಿರುವ ಮಾಸ್ಕ್ ಮತ್ತು ಸ್ಯಾನಿಟೈಜರ್‌ಗಳನ್ನು ಹೆಚ್ಚಿನದರಕ್ಕೆ ಮಾರಾಟ ಮಾಡುತ್ತಿದ್ದ ಪ್ರಕರಣಗಳ ಸಂಖ್ಯೆ ಎಷ್ಟು; ಎಷ್ಟು ತಪಾಸಣೆಗಳನ್ನು ಕೈಗೊಳ್ಳಲಾಗಿದೆ? | <u>ಔಷಧ ನಿಯಂತ್ರಣ ಇಲಾಖೆ:-</u> ಮಾಸ್ಕ್ ಮತ್ತು ಸ್ಯಾನಿಟೈಜರ್‌ಗಳ ದರವನ್ನು ಭಾರತ ಸರ್ಕಾರದ Ministry of Consumer Affairs, Food and Public Distribution (department of Consumer Affairs, ನವದೆಹಲಿ ರವರು ಅಧಿಸೂಚನೆ ಸಂಖ್ಯೆ:S.O.1197(E) ರನ್ವಯ ನಿಗಧಿಪಡಿಸಿ ದಿನಾಂಕ:30.06.2020ರವರೆಗೆ ಮಾತ್ರ ಅನ್ವಯವಾಗುವಂತೆ ಅಧಿಸೂಚನೆಯನ್ನು ಹೊರಡಿಸಿದ್ದು, ಸದರಿ ಅಧಿಸೂಚನೆಯಂತೆ ಕೋವಿಡ್-19 ಸಂದರ್ಭದಲ್ಲಿ ಸಾರ್ವಜನಿಕರಿಗೆ ಮಾಸ್ಕ್ ಮತ್ತು ಸ್ಯಾನಿಟೈಸರ್ ನಿಗಧಿತ ಬೆಲೆಯಲ್ಲಿ ದೊರಕುವಂತೆ ಕ್ರಮ ವಹಿಸಲು ತಪಾಸಣೆಯನ್ನು ಕೈಗೊಂಡಿದ್ದು, ರಾಜ್ಯದಲ್ಲಿ ಒಟ್ಟು 2055 ಔಷಧ ಅಂಗಡಿಗಳಲ್ಲಿ ತಪಾಸಣೆ ನಡೆಸಿ, ಈ ಪೈಕಿ 91 ಸಂಸ್ಥೆಗಳು ಹೆಚ್ಚಿನ ದರದಲ್ಲಿ ಮಾಸ್ಕ್ ಮತ್ತು ಸ್ಯಾನಿಟೈಸರ್‌ಅನ್ನು ಮಾರಾಟ ಮಾಡಿರುವುದನ್ನು ಪತ್ತೆ ಹಚ್ಚಲಾಗಿದೆ.<br><br><u>ಕಾನೂನು ಮಾಪನ ಇಲಾಖೆ:-</u><br><br>ಕೋವಿಡ್-19 ಸಂದರ್ಭದಲ್ಲಿ ಸಾರ್ವಜನಿಕರಿಗೆ ಅವಶ್ಯವಿರುವ ಮಾಸ್ಕ್ ಮತ್ತು ಸ್ಯಾನಿಟೈಸರ್‌ಗಳನ್ನು ಹೆಚ್ಚಿನಕ್ಕೆ ದರಕ್ಕೆ ಮಾರಾಟ ಮಾಡುತ್ತಿದ್ದ ಪ್ರಕರಣಗಳು ಹಾಗೂ ತಪಾಸಣೆಗಳ ವಿವರಗಳು ಈ ಕೆಳಗಿನಂತಿವೆ:-<br><br>ಒಟ್ಟು ತಪಾಸಣೆಗಳ ಸಂಖ್ಯೆ: 7575<br>ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿದ್ದ ಪ್ರಕರಣಗಳ ಸಂಖ್ಯೆ: 276 |

| | | |
|---|---|---|
| ಆ) | ಇವರುಗಳಿಂದ ವಸೂಲಿ ಮಾಡಿರುವದಂಡದ ಪ್ರಮಾಣವೆಷ್ಟು ಹಾಗೂ ಕೈಗೊಂಡಿರುವ ಕ್ರಮಗಳಾವುವು? | ಮಾಸ್ಕ್ ಮತ್ತು ಸ್ಯಾನಿಟೈಸರ್‌ಗಳನ್ನು ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿರುವವರ ವಿರುದ್ಧ ನಿಯಮಾನುಸಾರ ಪ್ರಕರಣಗಳನ್ನು ದಾಖಲಿಸಿ, ರೂ.12,62,000/–ಗಳ ದಂಡವನ್ನು ವಸೂಲಿ ಮಾಡಲಾಗಿದೆ.<br><br>ಎಂ.ಆರ್.ಪಿ. ಗಿಂತ ಹೆಚ್ಚಿನ ದರಕ್ಕೆ ಮಾರಾಟ ಮಾಡುತ್ತಿದ್ದ 27 ವ್ಯಾಪಾರ, ವಾಣಿಜ್ಯ ಸಂಸ್ಥೆಗಳ ವಿರುದ್ಧ ನಿಯಮಾನುಸಾರ ಮೊಕದ್ದಮೆಗಳನ್ನು ದಾಖಲಿಸಲಾಗಿದೆ. |

ಆಕುಕ 196 ಐಎಂಎಂ 2020

(ಬಿ. ಶ್ರೀರಾಮುಲು)
ಆರೋಗ್ಯ ಮತ್ತು ಕುಟುಂಬ ಕಲ್ಯಾಣ
ಮತ್ತು ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು.